**All India Radio: Bangalore**
**Regional Bulletin In Kannada**
**25.07.2025 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

1. ಚಿತ್ರದುರ್ಗದಲ್ಲಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ನಿಯೋಗದಿಂದ ಬರ ಪರಿಶೀಲನೆ ; ರೈತರ ಅಹವಾಲು ಆಲಿಸಿದ ಸರ್ಕಾರ
2. ಉದ್ಯೋಗ ಖಾತರಿಯಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಜಮೀನಿನಲ್ಲಿ ಫಲವೃಕ್ಷೆದ್ಯಾನ - ಸಚಿವ ಈಶ್ವರ್ ಖಂಡ್ರೆ
3. ಆಗಸ್ಟ್ ೧ ರಂದು ಹೈಕೋರ್ಟ್‌ನ ಧಾರವಾಡ ಪೀಠದಲ್ಲಿ ಮಹಿಳಾ ನ್ಯಾಯಮೂರ್ತಿಗಳಿಂದ ಕಲಾಪ
4. ನವದೆಹಲಿ, ಮಂಡ್ಯ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ನಡುವೆ ಮೂರು ಕೃಷಿ ವಿಜ್ಞಾನ ಕೇಂದ್ರಗಳ ವರ್ಗಾವಣೆಗೆ ಒಡಂಬಡಿಕೆ
5. ಬೆಂಗಳೂರಿನಲ್ಲಿ ನಡೆಯುತ್ತಿರುವ ಕಾಮಗಾರಿಗಳಿಂದ ಪರಿಸರ ಮಾಲಿನ್ಯ ; ಸರ್ಕಾರದ ವಿರುದ್ಧ ಬಿಜೆಪಿ ಅಸಮಾಧಾನ

<><><><>

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್, ಅರಣ್ಯ ಸಚಿವ ಈಶ್ವರ್ ಖಂಡ್ರೆ ಇಂದು ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲೂಕಿನ ಯರಬಳ್ಳಿ ಗ್ರಾಮ ಸೇರಿದಂತೆ ವಿವಿಧೆಡೆ ಜಮೀನುಗಳಿಗೆ ಭೇಟಿ ನೀಡಿ, ಬರ ಪರಿಸ್ಥಿತಿಯನ್ನು ಖುದ್ದು ಪರಿಶೀಲಿಸಿದರು. ಇದೇ ವೇಳೆ ಈವರೆಗಿನ ಕೃಷಿ ಚಟುವಟಿಕೆ ಕುರಿತಂತೆ ರೈತರ ಅಹವಾಲು ಆಲಿಸಿದರು. ವದ್ದಿಕೆರೆ ಗ್ರಾಮದ ರೈತರ ಜಮೀನಿಗೆ ಭೇಟಿ ನೀಡಿದ ಮುಖ್ಯಮಂತ್ರಿ ನೇತೃತ್ವದ ನಿಯೋಗ ಒಣಗಿ ಹೋಗಿರುವ ಸೂರ್ಯಕಾಂತಿ ಬೆಳೆಯನ್ನು ವೀಕ್ಷಿಸಿದರು. ಸೂರ್ಯಕಾಂತಿ ಬಿತ್ತನೆಗೆ ತಗುಲಿದ ವೆಚ್ಚ ಹಾಗೂ ಹಾನಿಯ ಕುರಿತು ರೈತರಿಂದ ಮಾಹಿತಿ ಪಡೆದರು.

<><><><>

ರಾಜ್ಯದಲ್ಲಿ ಎದುರಾಗಿರುವ ಬರ ಪರಿಸ್ಥಿತಿಯನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಚಿತ್ರದುರ್ಗ ಜಿಲ್ಲೆಯ ಹಿರಿಯೂರಿಗೆ ಭೇಟಿ ನೀಡಿದ್ದ ಅವರು, ವಿಭಾಗೀಯ ಮಟ್ಟದ ಬರ ಪರಿಶೀಲನಾ ಸಭೆಯಲ್ಲಿ ಭಾಗವಹಿಸುವ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿ, ಯಾವುದೇ ಕಾರಣಕ್ಕೂ ಜನರಿಗೆ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ. ಆಲಮಟ್ಟಿ ಭಾಗ ಹೊರತುಪಡಿಸಿ ರಾಜ್ಯದ ಉಳಿದೆಲ್ಲ ಪ್ರದೇಶಗಳಲ್ಲೂ ಬರ ವಾತಾವರಣ ಸೃಷ್ಟಿಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಸರ್ಕಾರಿ ಶಾಲೆಗಳ ದತ್ತು ಸ್ವೀಕಾರ ವಿಚಾರವಾಗಿ ಮಾತನಾಡಿದ ಅವರು, ಖಾಸಗಿ ಶಾಲೆಗಳ ಮೇಲೆ ಹೆಚ್ಚುವರಿ ಹೊರೆ ಹೊರೆಸುತ್ತಿಲ್ಲ. ಉನ್ನತ ಮಟ್ಟದ ಖಾಸಗಿ ಶಾಲೆಗಳು ಸಿಎಸ್‌ಆರ್ ನಿಧಿಯಡಿ ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಮೂಲಸೌಕರ್ಯ ಹಾಗೂ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸಲು ಆಹ್ವಾನಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಹಳ್ಳಿಯ ಮಕ್ಕಳಿಗೂ ನಗರ ಮಟ್ಟದಂತೆ ಉನ್ನತ ಮಟ್ಟದ ಶಿಕ್ಷಣ ಸಿಗಬೇಕು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><><><>

ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಸರ್ಕಾರಿ ಜಮೀನಿನಲ್ಲಿ "ಫಲವೃಕ್ಷೋದ್ಯಾನ" ಅಭಿವೃದ್ಧಿಪಡಿಸಿ ಇದನ್ನು ವಾರ್ಷಿಕ ಆಧಾರದ ಮೇಲೆ ಪಾರದರ್ಶಕವಾಗಿ ಹರಾಜು ಮೂಲಕ ಅದೇ ಗ್ರಾಮದ ಯುವಜನರಿಗೆ ಗುತ್ತಿಗೆ ನೀಡುವ ಬಗ್ಗೆ ಕ್ರಮ ವಹಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಸೂಚಿಸಿದ್ದಾರೆ. ಪ್ರತಿ ಗ್ರಾಮದಲ್ಲಿ ಈ ರೀತಿಯ ಫಲವೃಕ್ಷೋದ್ಯಾನ ಅಭಿವೃದ್ಧಿಪಡಿಸುವುದರಿಂದ ಗ್ರಾಮದಲ್ಲಿನ ಹಸಿರು ಹೊದಿಕೆಯೂ ಹೆಚ್ಚಲಿದೆ. ನಿರುದ್ಯೋಗಿ, ಭೂರಹಿತ ಯುವಜನರಿಗೆ ಉದ್ಯೋಗವೂ ಲಭಿಸಲಿದೆ. ಇದರಿಂದ ಗ್ರಾಮ ಪಂಚಾಯತಿ ಮತ್ತು ಕಂದಾಯ ಇಲಾಖೆಗೆ ಆದಾಯವೂ ಬರಲಿದೆ ಎಂದು ಇಲಾಖಾ ಕಾರ್ಯದರ್ಶಿಗೆ ನೀಡಿರುವ ಲಿಖಿತ ಸೂಚನೆಯಲ್ಲಿ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ. ಪಂಚಾಯತಿ ವ್ಯಾಪ್ತಿಯ ಕಂದಾಯ ಇಲಾಖೆಗೆ ಸೇರಿದ

ಸರ್ಕಾರಿ ಭೂಮಿಯಲ್ಲಿ ತೋಟಗಾರಿಕೆ ಬೆಳೆಗಳಾದ ಮಾವು, ಸಪೋಟ, ತೆಂಗು, ಹೈಬ್ರೀಡ್ ನೇರಳೆ, ಹುಣಸೆ ಇತ್ಯಾದಿ ಬೆಳೆಸಿದರೆ ಅದರಿಂದ ಪಂಚಾಯತಿಗಳಿಗೆ ಮತ್ತು ಕಂದಾಯ ಇಲಾಖೆಗೆ ಆದಾಯ ಬರಲಿದೆ. ಪ್ರಮುಖವಾಗಿ ಸರ್ಕಾರಿ ಭೂಮಿಯ ಒತ್ತುವರಿಯೂ ನಿಲ್ಲಲಿದೆ. ತೋಟಗಾರಿಕೆ ಬೆಳೆಯ ಈ ವೃಕ್ಷಗಳನ್ನು ಯಾವಾಗ ಬೇಕಾದರೂ ತೆರವು ಮಾಡಿ ಸರ್ಕಾರದ ಯೋಜನೆಗಳಿಗೆ ಭೂ ಬಳಕೆ ಮಾಡಲೂ ಅವಕಾಶ ಇರಲಿದೆ ಎಂದು ಪತ್ರದಲ್ಲಿ ಪ್ರಸ್ತಾಪಿಸಿದ್ದಾರೆ.

<><><><>

ರಾಜ್ಯ ಹೈಕೋರ್ಟ್ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಧಾರವಾಡ ಪೀಠದಲ್ಲಿ ಆಗಸ್ಟ್ ೧ರಂದು ಇಡೀ ದಿನದ ಕಲಾಪಗಳನ್ನು ಒಟ್ಟು ೧೦ ಮಹಿಳಾ ನ್ಯಾಯಮೂರ್ತಿಗಳು ನಡೆಸಿಕೊಡಲಿದ್ದಾರೆ. ಮುಖ್ಯ ನ್ಯಾಯಮೂರ್ತಿ ವಿಭುಬಕ್ರು ಆದೇಶದಂತೆ ಹೈಕೋರ್ಟ್ ನ್ಯಾಯಾಂಗ ವಿಭಾಗದ ರಿಜಿಸ್ಟ್ರಾರ್ ರೋಣಾ ವಾಸುದೇವ ಅವರು ಈ ಕುರಿತಂತೆ ಅಧಿಸೂಚನೆ ಹೊರಡಿಸಿದ್ದಾರೆ. ಅಧಿಸೂಚನೆಯಲ್ಲಿ ಮೂರು ವಿಭಾಗೀಯ ಹಾಗೂ ನಾಲ್ಕು ಏಕಸದಸ್ಯ ನ್ಯಾಯಪೀಠಗಳನ್ನು ರಚಿಸಲಾಗಿದೆ. ಮೂರು ವಿಭಾಗೀಯ ನ್ಯಾಯಪೀಠದಲ್ಲಿ ನ್ಯಾಯಮೂರ್ತಿಗಳಾದ ಅನು ಶಿವರಾಮನ್ ಹಾಗೂ ಕೆ.ಜಿ.ಶಾಂತಿ, ಜ್ಯೋತಿಮೂಲಿಮನಿ, ಪಿ.ಶ್ರೀಸುಧಾ, ಲಲಿತಾಕನ್ನೆಗಂಟಿ ಹಾಗೂ ಕೆ.ಎಸ್.ಹೇಮಲೇಖಾ ಕಾರ್ಯನಿರ್ವಹಿಸಲಿದ್ದಾರೆ. ನ್ಯಾಯಮೂರ್ತಿಗಳಾದ ಚೆಲ್ಲಕೂರು ಸುಮಲತಾ, ತಾರಾ ವಿತಸ್ತಾ ಗಂಜು, ಕೆ.ಬಿ.ಗೀತಾ ಹಾಗೂ ರಾಜೇಶ್ವರಿ ಎಂ. ಹೆಗ್ಡೆ ಏಕಸದಸ್ಯ ನ್ಯಾಯಪೀಠದಲ್ಲಿ ಕಾರ್ಯ ನಿರ್ವಹಿಸಲಿದ್ದಾರೆ. ಆಗಸ್ಟ್ ೮ ಮತ್ತು ೯ ರಂದು ಬೆಂಗಳೂರಿನಲ್ಲಿ ದೇಶದ ಎಲ್ಲ ಹೈಕೋರ್ಟ್ ಮಹಿಳಾ ನ್ಯಾಯಮೂರ್ತಿಗಳ ಸಮಾವೇಶ ನಡೆಸುವ ಹಿನ್ನೆಲೆಯಲ್ಲಿ ಪೂರ್ವಭಾವಿಯಾಗಿ ಈ ಪೀಠ ರಚನೆ ಮಾಡಲಾಗಿದೆ.

<><><><>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇದು ಮನ್ ಕಿ ಬಾತ್‌ನ ೧೨೫ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಹಾಗೂ ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮವನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

<><><><>

ಭಾರತೀಯ ಕೃಷಿ ಅನುಸಂಧಾನ ಪರಿಷತ್, ನವದೆಹಲಿ ಮತ್ತು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ಮಂಡ್ಯ ನಡುವೆ ಮೂರು ಕೃಷಿ ವಿಜ್ಞಾನ ಕೇಂದ್ರಗಳ ವರ್ಗಾವಣೆಗೆ ಒಡಂಬಡಿಕೆಯಾಗಿದೆ. ಭಾರತೀಯ ಕೃಷಿ ಅನುಸಂಧಾನ ಪರಿಷತ್, ನವದೆಹಲಿ ಮತ್ತು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಕೃಷಿ ವಿಜ್ಞಾನ ಕೇಂದ್ರಗಳ ಆಡಳಿತಾತ್ಮಕ ನಿಯಂತ್ರಣವನ್ನು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರಿಂದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯಕ್ಕೆ ವರ್ಗಾಯಿಸುವ ಕುರಿತು ಒಡಂಬಡಿಕೆಗೆ ಸಹಿ ಹಾಕಲಾಗಿದೆ. ಮೂರು ಕೃಷಿ ವಿಜ್ಞಾನ ಕೇಂದ್ರಗಳ ವರ್ಗಾವಣೆಯು ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕೃಷಿ ವಿಸ್ತರಣಾ ಸೇವೆಗಳು ಹಾಗೂ ಕೃಷಿ ತಂತ್ರಜ್ಞಾನಗಳ ಪ್ರಸರಣವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಈ ಕ್ರಮವು ಕೃಷಿ ಶಿಕ್ಷಣ, ಸಂಶೋಧನೆ ಮತ್ತು ವಿಸ್ತರಣಾ ಚಟುವಟಿಕೆಗಳ ನಡುವೆ ಉತ್ತಮ ಸಮನ್ವಯವನ್ನು ಸಾಧಿಸಲು ಸಹಕಾರಿಯಾಗಲಿದೆ.

<><><><>

ರಾಜ್ಯ ಸರ್ಕಾರ ಬೆಂಗಳೂರನ್ನು ಧೂಳಿನ ನಗರವನ್ನಾಗಿ ಪರಿವರ್ತಿಸುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಅಭಿವೃದ್ಧಿಯ ಹೆಸರಿನಲ್ಲಿ ನಾಗರಿಕರಿಗೆ ಅನಾನುಕೂಲತೆ ಉಂಟು ಮಾಡುವುದು ಸರ್ಕಾರದ ಸಾಧನೆಯೇ ಎಂದು ತಮ್ಮ ಹೇಳಿಕೆಯಲ್ಲಿ ಪ್ರಶ್ನಿಸಿದ್ದಾರೆ. ಜಿಬಿಎ ಮತ್ತು ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ನಿರ್ಲಕ್ಷ್ಯದಿಂದಾಗಿ ನಗರದ ನಿವಾಸಿಗಳು ಪ್ರತಿನಿತ್ಯ ಧೂಳು ಮತ್ತು ಕಳಪೆ ಪರಿಸ್ಥಿತಿಗಳನ್ನು ಸಹಿಸಿಕೊಳ್ಳಬೇಕಾಗಿದೆ ಎಂದು ದೂರಿದ್ದಾರೆ. ಕೆಲ ಪ್ರದೇಶಗಳಲ್ಲಿ ಕುಡಿಯುವ ನೀರು ಮತ್ತು

ಭೂಗತ ಒಳಚರಂಡಿ ಪೈಪ್‌ಲೈನ್ ಕಾಮಗಾರಿಗಳು ಪ್ರಾರಂಭವಾಗಿ ಒಂದು ವರ್ಷ ಕಳೆದರೂ ಮುಂದುವರೆದಿದೆ ಎಂದು ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಮಧ್ಯಪ್ರವೇಶಿಸಿ ಬಾಕಿಯಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಗಡುವು ನೀಡಬೇಕು ಎಂದು ಆಗ್ರಹಿಸಿದ್ದಾರೆ.

<><><>

ಬೆಂಗಳೂರನ್ನು ಸ್ವಚ್ಛವಾಗಿಡುವ ನಿಟ್ಟಿನಲ್ಲಿ ಮತ್ತೊಂದು ಮಹತ್ವದ ಹೆಜ್ಜೆಯಾಗಿ, ನಗರಾಭಿವೃದ್ಧಿ ಸಚಿವ ಕೃಷ್ಣಬೈರೇಗೌಡ ಥಣಿಸಂದ್ರದಲ್ಲಿ ಇಂದು ಬೃಹತ್ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿದರು. ಈ ಅಭಿಯಾನವು ಥಣಿಸಂದ್ರವನ್ನು ಸಂಪೂರ್ಣವಾಗಿ ಕಸಮುಕ್ತ ಪ್ರದೇಶವನ್ನಾಗಿ ಮಾಡುವ ಗುರಿಯನ್ನು ಹೊಂದಿದೆ. ಸ್ವಚ್ಛತಾ ಅಭಿಯಾನವನ್ನು ಥಣಿಸಂದ್ರದಲ್ಲಿರುವ ಪೊಲೀಸ್ ತರಬೇತಿ ಶಾಲೆ ಮತ್ತು ರಾಷ್ಟ್ರೋತ್ಥಾನ ಶಾಲೆಯ ಆವರಣದಲ್ಲಿ ಆರಂಭಿಸಲಾಯಿತು. ಸಾರ್ವಜನಿಕರ ಸಹಭಾಗಿತ್ವದಲ್ಲಿ ಈ ಪ್ರದೇಶದ ನೈರ್ಮಲ್ಯವನ್ನು ಸುಧಾರಿಸುವುದು ಮತ್ತು ಕಸ ವಿಲೇವಾರಿಗೆ ಸೂಕ್ತ ವ್ಯವಸ್ಥೆ ಕಲ್ಪಿಸುವುದು ಇದರ ಪ್ರಮುಖ ಉದ್ದೇಶವಾಗಿದೆ. ಈ ವೇಳೆ ಮಾತನಾಡಿದ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಬೈರೇಗೌಡ, ಎಲ್ಲರೂ ಕಸವನ್ನು ವಾಹನಗಳಿಗೆ ನೀಡಬೇಕು. ಎಲ್ಲೆಂದರಲ್ಲಿ ಕಸವನ್ನು ಎಸೆಯದಂತೆ ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

<><><>

ಮಾಜಿ ಸಚಿವ ಸಿ.ವೀರಣ್ಣ ಅವರು ವಯೋಸಹಜ ಕಾರಣದಿಂದ ಇಂದು ನಿಧನ ಹೊಂದಿದ್ದಾರೆ. ಅವರಿಗೆ ೮೯ ವರ್ಷ ವಯಸ್ಸಾಗಿತ್ತು. ಕೊರಟಗೆರೆ ವಿಧಾನಸಭಾ ಕ್ಷೇತ್ರದಿಂದ ೧೯೮೩, ೧೯೮೯ರಲ್ಲಿ ಶಾಸಕರಾಗಿ ಆಯ್ಕೆಯಾಗಿದ್ದ ಅವರು, ಮುಖ್ಯಮಂತ್ರಿಗಳಾಗಿದ್ದ ರಾಮಕೃಷ್ಣ ಹೆಗ್ಡೆ, ಎಸ್.ಆರ್.ಬೊಮ್ಮಾಯಿ, ಜೆ.ಹೆಚ್.ಪಟೇಲ್, ಹೆಚ್.ಡಿ.ದೇವೇಗೌಡರ ಅವಧಿಯಲ್ಲಿ ವಿವಿಧ ಖಾತೆಗಳ ಸಚಿವರಾಗಿ ಕಾರ್ಯನಿರ್ವಹಿಸಿದ್ದರು. ರಾಮಕೃಷ್ಣ ಹೆಗ್ಡೆ ಮುಖ್ಯಮಂತ್ರಿಯಾಗಿ ವಿದೇಶಕ್ಕೆ ತೆರಳಿದ್ದ ಸಂದರ್ಭದಲ್ಲಿ ೭ ಖಾತೆಗಳ ಸಚಿವರಾಗಿ ಕಾರ್ಯನಿರ್ವಹಿಸಿದ್ದರು. ಸಿ.ವೀರಣ್ಣ ಅವರ ನಿಧನಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸೇರಿದಂತೆ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

<><><>

ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ಅರಣ್ಯದೊಳಗೆ ಅಕ್ರಮವಾಗಿ ಪ್ರವೇಶಿಸಿದ್ದ ದ್ವಿಚಕ್ರ ವಾಹನ ಸವಾರರಿಗೆ ಅರಣ್ಯ ಇಲಾಖೆ ೨೫ ಸಾವಿರ ರೂಪಾಯಿ ದಂಡ ವಿಧಿಸಿ ಎಚ್ಚರಿಕೆ ನೀಡಿದೆ. ಕಳೆದ ೪ ದಿನಗಳ ಹಿಂದೆ ಇಬ್ಬರು ದ್ವಿಚಕ್ರ ವಾಹನದ ಮೂಲಕ ಬಂಡೀಪುರ ಸಫಾರಿ ಜೋನ್‌ನ ಅರಣ್ಯ ಪ್ರದೇಶಕ್ಕೆ ಅಕ್ರಮವಾಗಿ ಪ್ರವೇಶಿಸಿ ೧ ಕಿಲೋಮೀಟರ್‌ಗೂ ಅಧಿಕ ದೂರ ಸಂಚರಿಸಿದ್ದರು. ಸಾಮಾಜಿಕ ಜಾಲತಾಣದಲ್ಲಿ ವೀಡಿಯೋ ವೈರಲ್ ಆದ ಬೆನ್ನಲ್ಲೇ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಸಿಸಿಟಿವಿ ದೃಶ್ಯಾವಳಿ ಆಧರಿಸಿ ಆರೋಪಿಗಳನ್ನು ಪತ್ತೆಹಚ್ಚಿ ೨೫ ಸಾವಿರ ರೂಪಾಯಿ ದಂಡ ವಿಧಿಸಿ ತಪ್ಪೊಪ್ಪಿಗೆ ಪತ್ರ ಪಡೆದಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>